# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 46 ಜೆ.ಸಿ ನಗರ.ಬೆಂಗಳೂರು.

ಸಂಖ್ಯೆ: ಸ.ಅ/ವಾ-46/ಪಿ.ಆರ್/18 /2022-23 ದಿನಾಂಕ:-20-08-2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ:-20-08-2022 ರಂದು ವಾರ್ಡ್ 46 ಜೆ.ಸಿ ನಗರ ಮಾಲ್ಗುಡಿ ಪಾರ್ಕ್‌ನಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**::ಸಭೆಗೆ ಹಾಜರಾಗಿದ್ದವರ ವಿವರಗಳು::**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ. ಭೀಮಾನಾಯ್ಕ್ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ. ವಿಷ್ಣುಕಾಂತ್ ಜಾಧವ್ | ವಾರ್ಡ್ ಕಾರ್ಯದರ್ಶಿಗಳು ಹಾಗೂ ಕಿರಿಯ ಅಭಿಯಂತರರು, ವಾರ್ಡ್ ಸಂಖ್ಯೆ-46 |
| 3. | ಶ್ರೀ. ಶಫೀರ್ ರೆಹಮಾನ್ | ಸಬ್ ಇನ್ಸ್‌ಪೆಕ್ಟರ್, ಸಂಚಾರಿ ಪೊಲೀಸ್ ಠಾಣೆ, |
| 4. | ಶ್ರೀಮತಿ ಸೀಮಾ | ಕಿರಿಯ ಆರೋಗ್ಯ ಪರಿವೀಕ್ಷಕರು |
| 5. | ಶ್ರೀ.ಮೂರ್ತಿ | ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 6. | ಶ್ರೀ. ಪ್ರಣವ್ | ಬಿ.ಬಿ.ಎಂ.ಪಿ ಮಾರ್ಷಲ್, ವಾರ್ಡ್ ಸಂಖ್ಯೆ-46 |
| 7. | ಶ್ರೀ. ಮರಿಯಪ್ಪ | ಸಾರ್ವಜನಿಕರು |
| 8. | ಶ್ರೀ. ನಾಗಣ್ಣ ಗೌಡ | ಸಾರ್ವಜನಿಕರು |
| 9. | ಶ್ರೀ. ಮಧುಕರ್ ಶೆಟ್ಟಿ | ಸಾರ್ವಜನಿಕರು |
| 10. | ಶ್ರೀ. ರವಿಕುಮಾರ್ | ಸಾರ್ವಜನಿಕರು |
| 11. | ಶ್ರೀ. ಮುತ್ತಪ್ಪ | ಸಾರ್ವಜನಿಕರು |
| 12. | ಶ್ರೀ. ಹರೀಶ್ ರೆಡ್ಡಿ | ಸಾರ್ವಜನಿಕರು |
| 13. | ಶ್ರೀ. ಸುರೇಶ್.ಆರ್ | ಸಾರ್ವಜನಿಕರು |

ವಾರ್ಡ್ ಕಾರ್ಯದರ್ಶಿಗಳಾದ ಶ್ರೀ.ವಿಷ್ಣುಕಾಂತ್ ಜಾಧವ್, ಕಿರಿಯ ಅಭಿಯಂತರರು ರವರು ಸಭೆಗೆ ಹಾಜರಾದ ಅಧ್ಯಕ್ಷರು, ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ ಭೀಮಾನಾಯ್ಕ್ ರವರಿಗೆ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಮಾತನಾಡಲು ಕೋರಲಾಯಿತು.

1. 5ನೇ ಎ ಮತ್ತು 5ನೇ ಬಿ ಮುಖ್ಯರಸ್ತೆಗಳಲ್ಲಿ ಜೋತು ಬಿದ್ದಿರುವ ಮರದ ರೆಂಬೆ ಕೊಂಬೆಗಳನ್ನು ಕತ್ತರಿಸುವ ಬಗ್ಗೆ ಚರ್ಚಿಸಲಾಯಿತು.
2. 6ನೇ ಮುಖ್ಯರಸ್ತೆಯಲ್ಲಿರುವ ನೇತಾಜಿ ಪಾರ್ಕ್‌ನಲ್ಲಿ ವಿದ್ಯುತ್ ದೀಪಗಳು, ಜೋತು ಬಿದ್ದಿರುವ ಮರದ ರೆಂಬೆ ಕೊಂಬೆಗಳನ್ನು ಮತ್ತು ಉದ್ಯಾನವನವನ್ನು ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡುವ ವಿಷಯ ಕುರಿತು ಚರ್ಚಿಸಲಾಯಿತು.
3. ನೇತಾಜಿ ಉದ್ಯಾನವನ ಮತ್ತು ಮಾಲ್ಗುಡಿ ಉದ್ಯಾನವನಗಳಲ್ಲಿ ಹೊಸದಾಗಿ ಸಸಿಗಳನ್ನು ನೆಡುವ ಬಗ್ಗೆ ಚರ್ಚಿಸಲಾಯಿತು.

4. ಸಿಟಿಜನ್ ಪಾರ್ಕ್‌ನಿಂದ ಆರ್.ಟಿ ನಗರ ಮುಖ್ಯರಸ್ತೆಯವರೆಗೆ ರಸ್ತೆ ಬದಿಯಲ್ಲಿರುವ ಪಾದಚಾರಿ ಮಾರ್ಗ ಒತ್ತುವರಿಯಾಗಿರುವುದನ್ನು ತೆರವುಗೊಳಿಸುವ ಬಗ್ಗೆ ಚರ್ಚಿಸಲಾಯಿತು.
5. ಜೆ.ಸಿ ನಗರ ಮುಖ್ಯರಸ್ತೆಯನ್ನು ಬೆಳಗ್ಗೆ ಮತ್ತು ಸಂಜೆಯ ವೇಳೆಯಲ್ಲಿ ಏಕಮುಖ ಸಂಚಾರ ವ್ಯವಸ್ಥೆ ಕಲ್ಪಿಸುವ ವಿಷಯದ ಬಗ್ಗೆ ಚರ್ಚಿಸಲಾಯಿತು.
6. ವಾರ್ಡ್‌ನ ಉದ್ಯಾನವನಗಳಲ್ಲಿ ಸಂಜೆಯ ವೇಳೆ ಅಹಿತಕರ ಚಟುವಟಿಕೆಗಳು ನಡೆಯುತ್ತಿದ್ದು, ಇದರ ಬಗ್ಗೆ ಕ್ರಮ ಕೈಗೊಳ್ಳುವ ಬಗ್ಗೆ ಚರ್ಚಿಸಲಾಯಿತು.
7. ಮುಂದಿನ ವಾರ್ಡ್ ಸಮಿತಿ ಸಭೆಯನ್ನು 6ನೇ ಮುಖ್ಯರಸ್ತೆಯಲ್ಲಿರುವ ನೇತಾಜಿ ಸುಭಾಷ್ ಚಂದ್ರ ಬೋಸ್ ಉದ್ಯಾನವನದಲ್ಲಿ ಆಯೋಜಿಸುವ ಕುರಿತು ಚರ್ಚಿಸಲಾಯಿತು.
8. ಸಾರ್ವಜನಿಕರ ದೂರುಗಳಿಗೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು/ನೌಕರರು ಕೈಗೊಂಡಿರುವ ಕ್ರಮದ ಬಗ್ಗೆ ಮುಂದಿನ ಸಭೆಯಲ್ಲಿ ಮಾಹಿತಿ ನೀಡುವ ಕುರಿತು ಚರ್ಚಿಸಲಾಯಿತು.
9. ಗೈರು ಹಾಜರಿಯಾಗಿರುವ ಅಧಿಕಾರಿಗಳಿಗೆ ನೋಟೀಸ್ ನೀಡುವ ಕುರಿತು ಚರ್ಚಿಸಲಾಯಿತು.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 46 ಜೆ.ಸಿ ನಗರ

ಅಧ್ಯಕ್ಷರು 20/8/22
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 46 ಜೆ.ಸಿ ನಗರ

**ಪ್ರತಿಯನ್ನು:**

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರ ಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
4. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹ